ಸಂ.	ಹೆಸರು	ಯೋಜನೆ	ಯೋಜನೇತರ	ಒಟ್ಟು
1	ಬಿಜಾಪುರ	1195.89	359.72	1555.61
2	ಧಾರವಾಡ	2097.26	300.07	2397.33
3	ಬಾಗಲಕೋಟೆ	849.11	215.86	1064.97
4	ಗುಲ್ಬರ್ಗಾ	1754.52	256.90	1991.42
5	ಬಳ್ಳಾರಿ	972.60	240.93	1113.53
6	ಬೀದರ್	1046.29	123.88	1170.17
7	ರಾಯಚೂರು	972.54	243.02	1215.56
8	ಕೊಪ್ಪಳ	1157.50	112.10	2269.60
	ಒಟ್ಟು	10045.71	1732.48	11778.19

ಕ್ರ. ಸಂ.	ಜಿಲ್ಲೆಗಳ ಹೆಸರು	ಸರ್ವ ಶಿಕ್ಷಣ ಅಭಿಯಾನ		
		ಯೋಜನೆ	ಯೋಜನೇತರ	ಒಟ್ಟು
1	ಬಿಜಾಪುರ	6348.85	–	6348.85
2	ಧಾರವಾಡ	3469.76	–	3469.76
3	ಬಾಗಲಕೋಟೆ	2768.03	–	2768.03
4	ಗುಲ್ಬರ್ಗಾ	8463.52	–	8463.52
5	ಬಳ್ಳಾರಿ	6103.11	–	6103.11
6	ಬೀದರ್	5412.67	–	5412.67
7	ರಾಯಚೂರು	2857.81	–	2857.81
8	ಕೊಪ್ಪಳ	2521.55	–	2521.55
	ಒಟ್ಟು	37945.3	–	37945.30

39 (12) ಶ್ರೀ ಬಸವರಾಜು ಹೆಚ್.ಡಿ. (ವಿರಾಜಪೇಟೆ) : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ;

ಅ) ವಿರಾಜಪೇಟೆ ತಾಲ್ಲೂಕಿನ ವ್ಯಾಪ್ತಿಯಲ್ಲಿನ ಏತ ನೀರಾವರಿ ಕಾಮಗಾರಿಗಳಾದ ಕೊಂಗಣ ಹಾಗೂ ಮಾಲ್ದಾರೆ ಏತ ನೀರಾವರಿ ಕಾಮಗಾರಿಗಳನ್ನು ಕೈಗೊಳ್ಳುವುದಾಗಿ ಸರ್ಕಾರ ಭರವಸೆ ನೀಡಿದ್ದರೂ ಕಾರ್ಯಗತವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ;

ಇ) ಪ್ರಸಕ್ತ ವರ್ಷದಲ್ಲಿ ಈ ಕಾಮಗಾರಿಗಳಿಗೆ ಬಿಡುಗಡೆ ಮಾಡಿದ ಹಣವೆಷ್ಟು ?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು):

ಅ) ಬಂದಿದೆ.

ಆ) ಕೊಂಗಣ ಏತ ನೀರಾವರಿ ಯೋಜನೆ ಅನುಷ್ಠಾನದ ಬಗ್ಗೆ ಪರಿಶೀಲಿಸಲಾಗಿದ್ದು, ಈ ಯೋಜನೆ ಆರ್ಥಿಕವಾಗಿ ಹಾಗೂ ತಾಂತ್ರಿಕವಾಗಿ ಫಲಪ್ರದವಾಗುವುದಿಲ್ಲವೆಂದು ತಿಳಿದು ಬಂದಿದೆ. ಮೇಲ್ಕಾದರೆ ಏತ ನೀರಾವರಿ ಯೋಜನೆಗೆ ಸುಮಾರು 20.00 ಕೋಟಿ ರೂ.ಗಳ ವೆಚ್ಚವಾಗಬಹುದೆಂದು ಅಂದಾಜಿಸಲಾಗಿದೆ. ಈ ಯೋಜನೆ ಕಾವೇರಿ ಜಲಾನಯನದ ವ್ಯಾಪ್ತಿಯಲ್ಲಿ ಬರುವುದರಿಂದ, ಕಾವೇರಿ ನ್ಯಾಯಾಧೀಕರಣದ ಅಂತಿಮ ಆದೇಶದ ನಂತರವೇ ಈ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಪರಿಶೀಲಿಸಬಹುದಾಗಿರುತ್ತದೆ.

ಇ) ಯಾವುದೇ ಹಣ ಬಿಡುಗಡೆ ಮಾಡಿಲ್ಲ.

40 (110) ಶ್ರೀ ಗಂಗಾಧರ್ ನಾಗೇಶ್ ಭಟ್ (ಕಾರವಾರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ;

ಅ) ಉತ್ತರ ಕನ್ನಡ ಜಿಲ್ಲೆಯ ಜೋಯಡಾ ತಾಲ್ಲೂಕಿನಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರವು ಏನು ಕ್ರಮ ಕೈಗೊಳ್ಳುತ್ತಿದೆ ?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಹೌದು

ಆ) ಸರ್ಕಾರಿ ಪ್ರಾಥಮಿಕ ಶಾಲೆ

2005–06ನೇ ಸಾಲಿನ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯು ಮುಗಿದಿದ್ದು ನವೆಂಬರ್ 2006 ರಲ್ಲಿ ಉತ್ತರ ಕನ್ನಡ ಜಿಲ್ಲೆಗೆ 203 ಹುದ್ದೆಗಳನ್ನು ಹಂಚಲಾಗಿದೆ. ಈ ಪೈಕಿ ಜೈಯಿಡಾ ತಾಲ್ಲೂಕಿಗೆ 29 ಅಭ್ಯರ್ಥಿಗಳನ್ನು ನೇಮಕಾತಿ ಮಾಡಲಾಗಿದೆ.